# ತುಮಕೂರು ವಿಶ್ವವಿದ್ಯಾನಿಲಯ

ವಿಶ್ವವಿದ್ಯಾನಿಲಯ ಕಾರ್ಯಾಲಯ, ಬಿ. ಹೆಚ್. ರಸ್ತೆ, ತುಮಕೂರು-572 103

ದೂರವಾಣಿ : 0816-2254546, 0816-2255596, 0816-2255597 ಫ್ಯಾಕ್ಸ್ :0816-2270719


ಸಂಖ್ಯೆ: ತುವಿ: ಅಭಿವೃದ್ಧಿ ವಿಭಾಗ:4392: 2018-19/4366 ದಿನಾಂಕ: 18.03.2019

-:ಸುತ್ತೋಲೆ:-

**ವಿಷಯ:** ಸಕಾಲ ಸೇವೆಗಳಲ್ಲಿ ಮ್ಯಾನ್ಯುಯಲ್ ಆಗಿ ಅರ್ಜಿ ಸ್ವೀಕರಿಸುವುದನ್ನು ನಿಲ್ಲಿಸಿ, ಅರ್ಜಿ ಸ್ವೀಕೃತಿಗೆ ಆನ್ ಲೈನ್ ತಂತ್ರಾಂಶದ (ಸೇವಾ ಸಿಂಧು) ಬಳಕೆಯನ್ನು ಕಡ್ಡಾಯ ಮಾಡುವ ಕುರಿತು.

**ಉಲ್ಲೇಖ:** 1. ಸರ್ಕಾರಿ ಆದೇಶ ಸಂಖ್ಯೆ: ಇಡಿ 11 ಇಜೆಒವಿ 2019, ಬೆಂಗಳೂರು, ದಿನಾಂಕ 07.03.219

2. ಮಾನ್ಯ ಕುಲಪತಿಗಳ ಅನುಮೋದನೆ ದಿನಾಂಕ: 18.03.2019

******

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ಉಲ್ಲೇಖ (1)ರ ಕರ್ನಾಟಕ ಸಕಾಲ ಸೇವೆಗಳ ಅಧಿನಿಯಮ 2011 ಮತ್ತು (ತಿದ್ದುಪಡಿ) ಅಧಿನಿಯಮ 2014ಗಳ ಅನುಸೂಚಿಯಲ್ಲಿ, ಕಾಲೇಜು ಶಿಕ್ಷಣ ಇಲಾಖೆ,ತಾಂತ್ರಿಕ ಶಿಕ್ಷಣ ಇಲಾಖೆ ಮತ್ತು ವಿಶ್ವವಿದ್ಯಾಲಯಗಳ 18 ನಾಗರೀಕ ಸೇವೆಗಳನ್ನು ಕರ್ನಾಟಕ ಸಕಾಲ ಸೇವೆಗಳಡಿಯಲ್ಲಿ ಗುರುತಿಸಲಾಗಿದೆ.

ಪ್ರಸ್ತುತ ಸರ್ಕಾರವು ಸೇವಾ ಸಿಂಧು ಯೋಜನೆಯಡಿ ಉನ್ನತ ಶಿಕ್ಷಣ ಇಲಾಖೆಯ ಸೇವೆಗಳನ್ನು ಗುರುತಿಸಿ, ಅವುಗಳಿಗೆ ಆನ್ ಲೈನ್ ತಂತ್ರಾಂಶವನ್ನು ಅಭಿವೃದ್ಧಿಗೊಳಿಸಲಾಗಿರುತ್ತದೆ. ಸದರಿ ಆನ್ ಲೈನ್ ತಂತ್ರಾಂಶದ ಬಳಕೆಯನ್ನು ಕಡ್ಡಾಯ ಮಾಡಿರುವುದರಿಂದ ಸಕಾಲ ಅಧಿನಿಯಮದ ದತ್ತಾಂಶವನ್ನು ಬೈಪಾಸ್ ಮಾಡುವುದನ್ನು ತಡೆಗಟ್ಟಬಹುದು ಎಂದು ಸೂಚಿಸಿದೆ. ಈ ಹಿನ್ನೆಲೆಯಲ್ಲಿ ಉನ್ನತ ಶಿಕ್ಷಣ ಇಲಾಖೆಯಡಿಯಲ್ಲಿ ಬರುವ ಇಲಾಖೆಗಳು ಮತ್ತು ವಿಶ್ವವಿದ್ಯಾಲಯಗಳು, ಕರ್ನಾಟಕ ಸಕಾಲ ಸೇವೆಗಳ ಮುಖಾಂತರ ನಾಗರೀಕ ಸೇವೆಗಳನ್ನು ಈಗಾಗಲೇ ಅಭಿವೃದ್ಧಿ ಪಡಿಸಲಾಗಿರುವ ಆನ್ ಲೈನ್ ತಂತ್ರಾಂಶವನ್ನು ಬಳಸಿಕೊಂಡು ನೀಡಬಹುದಾದ ಸೇವೆಗಳಿಗೆ, ಅರ್ಜಿ ಸ್ವೀಕೃತಿಗೆ ಆನ್ ಲೈನ್ ತಂತ್ರಾಂಶದ (ಸೇವಾ ಸಿಂಧು) ಬಳಕೆಯನ್ನು ಕಡ್ಡಾಯಗೊಳಿಸಲಾಗಿದೆ ಮತ್ತು ಮ್ಯಾನ್ಯುಯಲ್ ಆಗಿ ಅರ್ಜಿ ಸ್ವೀಕರಿಸುವುದನ್ನು ಕೂಡಲೇ ನಿಲ್ಲಿಸಲಾಗಿದೆ. ಇ-ಆಡಳಿತ ಇಲಾಖೆಯು ಈ ಕೆಳಕಂಡ ಆನ್ ಲೈನ್ ಸೇವೆಗಳನ್ನು ತುಮಕೂರು ವಿಶ್ವವಿದ್ಯಾಲಯಕ್ಕೆ ಅಭಿವೃದ್ಧಿ ಪಡಿಸಿ, ಸಾರ್ವಜನಿಕರ ಉಪಯೋಗಕ್ಕೆ www.tumkuruniversity.ac.in, /www.sakala.kar.nic.in, / www.sevasindhu.kar.nic.in ಜಾಲತಾಣದಲ್ಲಿ ಪ್ರಕಟಿ ಪಡಿಸಿರುತ್ತದೆ.

| | |
|---|---|
| Tumkur University | Application for issue of Degree Certificate |
| | Application for verification of Genuineness of Marks Card |
| | Application for issue of Migration Certificate |
| | Application for issue of Provisional Degree Certificate |

ಮೇಲಿನ ಸೇವೆಗಳನ್ನು ಆನ್ ಲೈನ್ ಮುಖೇನ ಪಡೆಯಲು ತಮ್ಮ ಕಾಲೇಜು ವಿದ್ಯಾರ್ಥಿಗಳ ಗಮನಕ್ಕೆ ತರಲು ಈ ಮೂಲಕ ತಿಳಿಸಲಾಗಿದೆ.

19/03

ಕುಲಸಚಿವರು

ಕುಲಸಚಿವರು
ತುಮಕೂರು ವಿಶ್ವವಿದ್ಯಾನಿಲಯ
ತುಮಕೂರು

ಗೆ:

1. ಮುಖ್ಯಸ್ಥರು, ಸ್ನಾತಕೋತ್ತರ ಅಧ್ಯಯನ ಮತ್ತು ಸಂಶೋಧನ ವಿಭಾಗಗಳು, ತುಮಕೂರು ವಿಶ್ವವಿದ್ಯಾಲಯ,ತುಮಕೂರು
2. ಪ್ರಾಂಶುಪಾಲರು, ತುಮಕೂರು ವಿಶ್ವವಿದ್ಯಾನಿಲಯ ವ್ಯಾಪ್ತಿಯ ಎಲ್ಲಾ ಘಟಕ ಮತ್ತು ಸಂಯೋಜಿತ ಕಾಲೇಜುಗಳು,

ಪ್ರತಿಗಳು.

1. ಕುಲಸಚಿವರು, ಪರೀಕ್ಷಾಂಗ, ತುಮಕೂರು ವಿಶ್ವವಿದ್ಯಾನಿಲಯ,ತುಮಕೂರು
2. ಸಿಸ್ಟಂ ಅನಾಲಿಸ್ಟ್, ಗಣಕಯಂತ್ರ ವಿಭಾಗ, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು.
   (ತುಮಕೂರು ವಿಶ್ವವಿದ್ಯಾನಿಲಯದ ಜಾಲತಾಣದಲ್ಲಿ ಬಿತ್ತರಿಸುಂತೆ ಸೂಚಿಸಿದೆ
3. ಮಾನ್ಯ ಕುಲಪತಿಯವರ ಆಪ್ತ ಕಾರ್ಯದರ್ಶಿಗಳು, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು.
4. ಕಚೇರಿ ಪ್ರತಿ